ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 922
ಸದಸ್ಯರ ಹೆಸರು : ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 13-03-2020
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ	ರಾಜ್ಯದಲ್ಲಿ ಒಟ್ಟು ಎಷ್ಟು ಹೊಸ ಗ್ರಾಮ ಪಂಚಾಯತಿಗಳನ್ನು ಸೃಜನೆ ಮಾಡಲಾಗಿದೆ; ಹೊಸ ಗ್ರಾಮ ಪಂಚಾಯತಿಗಳಿಗೆ ಸರ್ಕಾರ ಕಲ್ಪಿಸಿರುವ ಮೂಲ ಸೌಕರ್ಯಗಳೇನು; ಬಿಡುಗಡೆಯಾದ ಅನುದಾನ ಎಷ್ಟು;	ರಾಜ್ಯದಲ್ಲಿ 462 ಹೊಸ ಗ್ರಾಮ ಪಂಚಾಯತಿಗಳನ್ನು ಸೃಜನೆ ಮಾಡಲಾಗಿದೆ. ನೂತನ ಗ್ರಾಮ ಪಂಚಾಯತಿಗಳಿಗೆ ಕಂಪ್ಯೂಟರ್ ಉಪಕರಣಗಳು, ಪಿಠೋಪಕರಣಗಳು ಸೇರಿದಂತೆ ಮೂಲಭೂತ ಸೌಕರ್ಯ ಒದಗಿಸಲು ಪ್ರತಿ ಗ್ರಾಮ ಪಂಚಾಯತಿಗೆ ತಲಾ ರೂ. 3.00 ಲಕ್ಷಗಳಂತೆ ಒಟ್ಟು ರೂ.13.86 ಕೋಟಿ ಅನುದಾನವನ್ನು ನೀಡಲಾಗಿದೆ.
ಆ	ಹೊಸದಾಗಿ ಸೃಜನೆಯಾದ ಗ್ರಾಮ ಪಂಚಾಯತಿಗಳ ಪೈಕಿ ಎಷ್ಟು ಗ್ರಾಮ ಪಂಚಾಯತಿಗಳಿಗೆ ನಿವೇಶನ ಮತ್ತು ಹೊಸ ಕಟ್ಟಡಗಳಿಗೆ ಮಂಜೂರಾತಿ ನೀಡಲಾಗಿದೆ;	ರಾಜ್ಯದಲ್ಲಿ 462 ಹೊಸ ಗ್ರಾಮ ಪಂಚಾಯತಿಗಳ ಪೈಕಿ 461 ಗ್ರಾಮ ಪಂಚಾಯತಿಗಳು ಹೊಸ ಕಛೇರಿ ಕಟ್ಟಡ ನಿರ್ಮಾಣ ಮಾಡಿಕೊಳ್ಳಲು ಅನುದಾನ ಬಿಡುಗಡೆ ಮಾಡಲಾಗಿದೆ..
ಇ	ನೂತನ ಗ್ರಾಮ ಪಂಚಾಯತಿಗಳು ಘೋಷಣೆಯಾಗಿ ಮೂರು ವರ್ಷಗಳು ಕಳೆದರೂ ಕಟ್ಟಡ, ಪೀಠೋಪಕರಣ, ಕಂಪ್ಯೂಟರ್ ಸೇರಿದಂತೆ ಮೂಲ ಸೌಕರ್ಯಕ್ಕಾಗಿ 20.00 ಲಕ್ಷ ಅನುದಾನ ನೀಡುವ ಸರ್ಕಾರದ ಭರವಸೆ ಕಾರ್ಯರೂಪಕ್ಕೆ ಬರದಿರಲು ಕಾರಣಗಳೇನು;	ಹೊಸ ಗ್ರಾಮ ಪಂಚಾಯತಿಗಳಿಗೆ ಕಛೇರಿ ಕಟ್ಟಡಗಳನ್ನು ನಿರ್ಮಿಸಲು ರೂ 40.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಯೋಜನೆ ರೂಪಿಸಲಾಗಿದೆ. ಈ ಪೈಕಿ ಸರ್ಕಾರದ ಅನುದಾನ ರೂ.20.00 ಲಕ್ಷ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ ರೂ.16.25 ಲಕ್ಷ ಹಾಗೂ 14ನೇ ಹಣಕಾಸು ಯೋಜನೆ ಅಥವಾ ಗ್ರಾಮ ಪಂಚಾಯತಿಗಳ ಸ್ವಂತ ಸಂಪನ್ಮೂಲದಡಿ ಉಳಿಕೆಯಾಗಿರುವ ರೂ.3.75 ಲಕ್ಷಗಳನ್ನು ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಈ ಉದ್ದೇಶಕ್ಕಾಗಿ ಮೊದಲ ಹಂತದಲ್ಲಿ 461 ಗ್ರಾಮ ಪಂಚಾಯತಿಗಳಿಗೆ ತಲಾ 1 ಗ್ರಾಮ ಪಂಚಾಯತಿಗೆ ರೂ.10.00 ಲಕ್ಷದಂತೆ ಒಟ್ಟು ರೂ. 46.10 ಕೋಟಿಗಳನ್ನು ಸರ್ಕಾರದಿಂದ ಬಿಡುಗಡೆ ಮಾಡಲಾಗಿದೆ. ಎರಡನೇ ಹಂತದಲ್ಲಿ ಈಗಾಗಲೇ ಮೊದಲ ಕಂತಿನ ಅನುದಾನ ಬಿಡುಗಡೆ ಮಾಡಿರುವ ಒಟ್ಟು 59 ಗ್ರಾಮ ಪಂಚಾಯತಿಗಳಿಗೆ ತಲಾ ಒಂದು ಗ್ರಾಮ ಪಂಚಾಯತಿಗೆ ರೂ.10.00 ಲಕ್ಷದಂತೆ ರೂ.5.90 ಕೋಟಿಗಳ ಅನುದಾನ ಬಿಡುಗಡೆ ಮಾಡಲಾಗಿದೆ. ಅಂದರೆ ಒಟ್ಟು 59 ಗ್ರಾಮ ಪಂಚಾಯತಿಗಳಿಗೆ ಪ್ರತಿ ಗ್ರಾಮ ಪಂಚಾಯತಿಗೆ ರೂ.20.00 ಲಕ್ಷಗಳ ಅನುದಾನ ನೀಡಲಾಗಿದೆ. ನೂತನ ಗ್ರಾಮ ಪಂಚಾಯತಿಗಳಿಗೆ ಕಂಪ್ಯೂಟರ್ ಉಪಕರಣಗಳು, ಪಿಠೋಪಕರಣಗಳು ಸೇರಿದಂತೆ ಮೂಲಭೂತ ಸೌಕರ್ಯ ಒದಗಿಸಲು ಪ್ರತಿ ಗ್ರಾಮ ಪಂಚಾಯತಿಗೆ ತಲಾ ರೂ. 3.00 ಲಕ್ಷಗಳಂತೆ ಒಟ್ಟು ರೂ.13.86 ಕೋಟಿ ಅನುದಾನವನ್ನು ನೀಡಲಾಗಿದೆ.
ಈ	ಹೊಸದಾಗಿ ಸೃಜನೆಯಾದ ಗ್ರಾಮ ಪಂಚಾಯತಿಗಳಿಗೆ ಅಗತ್ಯ ಸಿಬ್ಬಂದಿ ನೇಮಕಾತಿ ಪೂರ್ಣಗೊಂಡಿದೆಯೇ; ನೇಮಕವಾಗದಿದ್ದಲ್ಲಿ ವಿಳಂಬಕ್ಕೆ ಕಾರಣಗಳೇನು?	ಹೊಸದಾಗಿ ಸೃಜನೆಯಾದ ಪ್ರತಿ ಗ್ರಾಮ ಪಂಚಾಯತಿಗೆ ಒಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ಅಥವಾ ಗ್ರೇಡ್-2 ಹಾಗೂ ಗ್ರೇಡ್-1 ಗ್ರಾಮ ಪಂಚಾಯತಿಗಳಿಗೆ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳನ್ನು ಸೃಜಿಸಿ ಪ್ರಸ್ತುತ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ಹುದ್ದೆಗೆ ನೇಮಕಾತಿ ಮಾಡಲಾಗಿದೆ.

		ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಸರ್ಕಾರ ಶಾಖೆ) (ಗ್ರಾಮ ಪಂಚಾಯತಿ ಕಾರ್ಯದರ್ಶಿ ಕಮ್ ಗ್ರಾಮೀಣಾಭಿವೃದ್ಧಿ ಸಹಾಯಕ ಗ್ರೇಡ್–2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ನೇಮಕಾತಿ) (ವಿಶೇಷ) ನಿಯಮಗಳು, 2019 ರನ್ವಯ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–2 ವೃಂದದ ನೇರ ನೇಮಕಾತಿ ಕೋಟಾದ ಉಳಿಕೆ ವೃಂದ 263 ಮತ್ತು ಹೈದರಾಬಾದ್ ಕರ್ನಾಟಕ ವೃಂದದ 87 ಹುದ್ದೆಗಳು ಸೇರಿದಂತೆ ಒಟ್ಟು 350 ಹುದ್ದೆಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ ನೇರ ನೇಮಕಾತಿ ಕೋಟಾದ ಉಳಿಕೆ ವೃಂದ 55 ಮತ್ತು ಹೈದರಾಬಾದ್ ಕರ್ನಾಟಕ ವೃಂದದ 96 ಹುದ್ದೆಗಳು ಸೇರಿದಂತೆ ಒಟ್ಟು 151 ಹುದ್ದೆಗಳಿಗೆ ನೇಮಕಾತಿ ಮಾಡಲಾಗುತ್ತದೆ. ಹೊಸ ಗ್ರಾಮ ಪಂಚಾಯತಿಗಳಿಗೆ ಹಾಲಿ ಗ್ರಾಮ ಪಂಚಾಯತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದ, ಗ್ರಾಮ ಪಂಚಾಯತಿ ಕಾರ್ಯದರ್ಶಿ ವೃಂದ ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ ನೌಕರರನ್ನು ಹೆಚ್ಚುವರಿ ಪ್ರಭಾರದಲ್ಲಿರಿಸಲು ಕ್ರಮ ವಹಿಸಲಾಗಿದೆ.

ಸಂ. ಗ್ರಾಅಪ 271 ಗ್ರಾಪಂಅ 2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.